ಬುಧವಾರ,31.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 117
Digital Varthe Kannada Daily
Volume 01 - Issue 117
Wednesday 31.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಕನ್ನಡದ 'ನೀನಾದೆ ನಾ' ಧಾರಾವಾಹಿಯ ಖ್ಯಾತ ನಟಿ ನಂದಿನಿ ಆತ್ಮಹತ್ಯೆ



ಕನ್ನಡದ ಖ್ಯಾತ ಕಿರುತೆರೆ ನಟಿ ನಂದಿನಿ ಅವರು ಬೆಂಗಳೂರಿನ ತಮ್ಮ ಬಾಡಿಗೆ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬೆಂಗಳೂರಿನ ಆರ್ ಆರ್ ನಗರದಲ್ಲಿರುವ ತಮ್ಮ ನಿವಾಸದಲ್ಲಿ ನಂದಿನಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಕೊಟ್ಟೂರು ಮೂಲದ ನಂದಿನಿ ಅವರು ಕಳೆದ ಹಲವು ವರ್ಷಗಳಿಂದ ಬೆಂಗಳೂರಿನಲ್ಲಿ ವಾಸವಿದ್ದು, ಕನ್ನಡ ಕಿರುತೆರೆಯಲ್ಲಿ ಪೋಷಕ ನಟಿಯಾಗಿ ಗುರುತಿಸಿಕೊಂಡಿದ್ದರು. 'ಜೀವ ಹೂವಾಗಿದೆ', 'ಸಂಘರ್ಷ', 'ಮಧುಮಗಳು', 'ನೀನಾದೆ ನಾ' ಸೇರಿದಂತೆ ಅನೇಕ ಜನಪ್ರಿಯ ಧಾರಾವಾಹಿಗಳಲ್ಲಿ ಅಭಿನಯಿಸಿದ್ದರು. ಕೇವಲ ಕನ್ನಡದಲ್ಲಷ್ಟೇ ಅಲ್ಲದೆ, ತಮಿಳು ಮತ್ತು ತೆಲುಗು ಧಾರಾವಾಹಿಗಳಲ್ಲಿಯೂ ನಂದಿನಿ ಅಭಿನಯಿಸಿದ್ದರು. ಇತ್ತೀಚಿನ ದಿನಗಳಲ್ಲಿ ನಂದಿನಿ, 'ಗೌರಿ' ಎಂಬ ತಮಿಳು ಧಾರಾವಾಹಿಯಲ್ಲಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಈ ಧಾರಾವಾಹಿಯಲ್ಲಿ ದುರ್ಗಾ ಹಾಗೂ ಕನಕ ಎಂಬ ಎರಡು ವಿಭಿನ್ನ ಪಾತ್ರಗಳನ್ನು ಅವರು ನಿರ್ವಹಿಸುತ್ತಿದ್ದು, ಅವರ ಅಭಿನಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿತ್ತು. 'ಗೌರಿ' ಧಾರಾವಾಹಿಯ ಚಿತ್ರೀಕರಣ ಆರಂಭದಲ್ಲಿ ಬೆಂಗಳೂರಿನಲ್ಲಿ ನಡೆಯುತ್ತಿತ್ತು. ಆದರೆ ಕೆಲವು ದಿನಗಳ ಹಿಂದೆಯಷ್ಟೇ ಶೂಟಿಂಗ್ ಅನ್ನು ಚೆನ್ನೈಗೆ ಸ್ಥಳಾಂತರಿಸಲಾಗಿತ್ತು ಎಂದು ಹೇಳಲಾಗುತ್ತಿದೆ.

ನಂದಿನಿ ಅವರು ಚೆನ್ನೈನಲ್ಲಿ ನಡೆಯುತ್ತಿದ್ದ ಚಿತ್ರೀಕರಣದಲ್ಲಿ ಭಾಗವಹಿಸುತ್ತಿದ್ದು, ಇತ್ತೀಚೆಗೆ ಶೂಟಿಂಗ್ ಮುಗಿಸಿಕೊಂಡು ವಿಶ್ರಾಂತಿಗಾಗಿ ಬೆಂಗಳೂರಿಗೆ ಮರಳಿದ್ದರು ಎನ್ನಲಾಗಿದೆ. ಆದರೆ, ಅವರು ನಿನ್ನೆ ತಮ್ಮ ನಿವಾಸದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ.

## ಅನಾಹುತಕ್ಕೆ ಅಮಾಯಕರು: ಪ್ರತ್ಯೇಕ ಅಪಘಾತಗಳಲ್ಲಿ ಮಗು ಸೇರಿ ನಾಲ್ವರು ಮೃತ್ಯು



**ಬೆಳಗಾವಿ:** ಸಿಮೆಂಟ್ ತುಂಬಿದ್ದ ಲಾರಿ ಪಲ್ಟಿಯಾದ ಪರಿಣಾಮ ಓರ್ವ ವಿದ್ಯಾರ್ಥಿ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಬೆಳಗಾವಿ ಜಿಲ್ಲೆ ರಾಯಬಾಗ ತಾಲೂಕಿನ ಹಾಲಶಿರಗೂರು ಬಳಿ ನಡೆದಿದೆ. ಘಟನೆಯಲ್ಲಿ ಇಬ್ಬರು ವಿದ್ಯಾರ್ಥಿಗಳಿಗೆ ಗಾಯವಾಗಿದ್ದು, ಹಾರೂಗೇರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗ್ತಿದೆ. ಕುಡಚಿ ಕಡೆಯಿಂದ ಹಾರೂಗೇರಿ ಕಡೆಗೆ ಹೊರಟಿದ್ದ ಸಿಮೆಂಟ್ ಲಾರಿ, ತಿರುವಿನಲ್ಲಿ ಶಾಲೆಗೆ ಹೋಗ್ತಿದ್ದ ವಿದ್ಯಾರ್ಥಿಗಳ ಮೇಲೆ ಪಲ್ಟಿಯಾಗಿದೆ. ಈ ವೇಳೆ 5ನೇ ತರಗತಿ ವಿದ್ಯಾರ್ಥಿ ಅಮಿತ್ ಕಾಂಬಳೆ(11) ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟಿದ್ದಾರೆ. ಅಂಜಲಿ ಕಾಂಬಳೆ(15), ಅವಿನಾಶ ಕಾಂಬಳೆ(14) ಸ್ಥಿತಿ ಗಂಭೀರವಾಗಿದೆ.

ಅಗ್ನಿಶಾಮಕ ಸಿಬ್ಬಂದಿ ಕ್ರೇನ್ ಮೂಲಕ ಲಾರಿ ಮೇಲೆತ್ತಿ ಕೆಳಗೆ ಸಿಲುಕಿದ್ದವರ ರಕ್ಷಣೆ ಮಾಡಿದ್ದಾರೆ. ನಿಯಂತ್ರಣ ತಪ್ಪಿ ಖಾಸಗಿ ಬಸ್ ಧರೆಗೆ ಗುದ್ದಿದ ಪರಿಣಾಮ ಮಗು ಅಸುನೀಗಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಹುಲಿಕಲ್ ಘಾಟ್‌ನಲ್ಲಿ ನಡೆದಿದೆ. ಒಂದೂವರೆ ವರ್ಷದ ಮಗು ಮೃತಪಟ್ಟಿದ್ದರೆ, ಘಟನೆಯಲ್ಲಿ 10 ಜನರಿಗೆ ಗಂಭೀರ ಗಾಯವಾಗಿದೆ. ಬಸ್ ದಾವಣಗೆರೆಯಿಂದ ಮಂಗಳೂರು ಕಡೆ ಹೋಗುತ್ತಿತ್ತು ಎನ್ನಲಾಗಿದ್ದು, ಘಟನೆ ಸಂಬಂಧ ಹೊಸನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬೈಕ್‌ಗೆ ಬಸ್ ಡಿಕ್ಕಿ: ಇಬ್ಬರು ಸಾವು

ಬಸ್ ಡಿಕ್ಕಿಯಾಗಿ ಬೈಕ್‌ನಲ್ಲಿದ್ದ ಇಬ್ಬರು ದಾರುಣವಾಗಿ ಮೃತಪಟ್ಟಿರುವ ಘಟನೆ ಹುಬ್ಬಳ್ಳಿ ತಾಲೂಕಿನ ಅಂಚಟಗೇರಿ ಗ್ರಾಮದ ಬಳಿ ನಡೆದಿದೆ. ಮಗು ಸ್ಥಿತಿ ಗಂಭೀರವಾಗಿದ್ದು, ಓವರ್‌ಟೇಕ್ ಮಾಡುವ ವೇಳೆ ನಿಯಂತ್ರಣ ತಪ್ಪಿ ಬಸ್ ಬೈಕ್‌ಗೆ ಗುದ್ದಿದೆ. ಸ್ಥಳಕ್ಕೆ ಹುಬ್ಬಳ್ಳಿ ಗ್ರಾಮೀಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಅಪಘಾತದಲ್ಲಿ ಮೃತಪಟ್ಟವರ ಮಾಹಿತಿ ಸಂಗ್ರಹಿಸುವ ಕೆಲಸ ಮಾಡಲಾಗ್ತಿದೆ.

## ಪಿಜಿಯಲ್ಲಿ ಸಿಲಿಂಡರ್ ಸ್ಫೋಟ ಓರ್ವ ಸಾವು, ಮೂವರಿಗೆ ಗಾಯ



**ಬೆಂಗಳೂರು:** ಪಿಜಿ ಯೊಂದರಲ್ಲಿ ಸಿಲಿಂಡರ್ ಸ್ಫೋಟಗೊಂಡು ಓರ್ವ ಸಾವನ್ನಪ್ಪಿದ್ದು, ಮೂವರು ಗಾಯಗೊಂಡಿರುವ ಘಟನೆ ಬೆಂಗಳೂರಿನ ಕುಂದಲಹಳ್ಳಿಯಲ್ಲಿ ನಡೆದಿದೆ. ಸೆವೆನ್ ಹಿಲ್ಸ್ ಕೋಲಿವಿಂಗ್ ಪಿಜಿಯಲ್ಲಿ ಘಟನೆ ನಡೆದಿದ್ದು, ಬಳ್ಳಾರಿ ಮೂಲದ ಅರವಿಂದ್ ಎಂಬುವವರು ಸಾವನ್ನಪ್ಪಿದ್ದಾರೆ. ವೆಂಕಟೇಶ್ (28), ವಿಶಾಲ್ (23), ಗೋಯಲ್ (25), ಎಂಬುವವರು ಗಾಯಗೊಂಡಿದ್ದಾರೆ ಘಟನಾ ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯ ಪೊಲೀಸರು ದೌಡಾಯಿಸಿದ್ದಾರೆ. ಪ್ರಾಥಮಿಕ ಮೂಲಗಳ ಪ್ರಕಾರ, ಪಿಜಿಯ ಕೆಳಮಹಡಿಯಲ್ಲಿದ್ದ ಅಡುಗೆ ಕೋಣೆಯಲ್ಲಿ ಅನಿಲ ಸೋರಿಕೆಯಾಗಿ ಸಿಲಿಂಡರ್ ಸ್ಫೋಟಗೊಂಡಿದೆ ಎಂದು ತಿಳಿದುಬಂದಿದೆ. ಸದ್ಯ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ ಘಟನಾ ಸ್ಥಳ ಪರಿಶೀಲಿಸಿರುವ ಪೊಲೀಸರು ಮೃತದೇಹ ಅರವಿಂದ್ ಶವವನ್ನ ಬೌರಿಂಗ್ ಆಸ್ಪತ್ರೆಗೆ ಶಿಫ್ಟ್ ಮಾಡಿದ್ದಾರೆ.

ಬಳಿಕ ಪಿಜಿಯಲ್ಲಿದ್ದ ಇತರರನ್ನ ಬೇರೆ ಬೇರೆ ಪಿಜಿಗಳಿಗೆ ಶಿಫ್ಟ್ ಮಾಡಿಸಿದ್ದಾರೆ. ಈ ಬೆನ್ನಲ್ಲೇ ಘಟನಾ ಸ್ಥಳಕ್ಕೆ ಜಿಬಿಎ ಅಧಿಕಾರಿಗಳು ಹಾಗೂ ಪೂರ್ವ ನಗರಪಾಲಿಕೆ ಅಧಿಕಾರಿಗಳು ಭೇಟಿ ನೀಡಿ ಘಟನೆ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ.

## ಕೆಟ್ಟ ಕನಸು, ಭಯದ ಕ್ಷಣಗಳು: ಬುರುಡೆ ಬಗ್ಗೆ ಜಯಂತ್ ಟಿ ಸ್ಪಷ್ಟನೆ



**ಮಂಗಳೂರು:** ಬುರುಡೆ ನೋಡಿ ನಾನು ಹೆದರಿ ಹೋಗಿದ್ದೆ ಎಂದು ಬುರುಡೆ ಗ್ಯಾಂಗ್‌ನ ಸದಸ್ಯ, ಪ್ರಕರಣದಲ್ಲಿ ಐದನೇ ಆರೋಪಿಯಾಗಿರುವ ಜಯಂತ್ ಟಿ ವಿಶೇಷ ತನಿಖಾ ತಂಡಕ್ಕೆ ಹೇಳಿಕೆ ನೀಡಿದ್ದ ವಿಚಾರ ಈಗ ಬೆಳಕಿಗೆ ಬಂದಿದೆ. ಹೌದು. ರೈಲಿನಲ್ಲಿ ಜಯಂತ್ ಬುರುಡೆಯನ್ನು ತೆಗೆದುಕೊಂಡು ಹೋಗಿದ್ದರೆ ವಿಮಾನದಲ್ಲಿ ಚಿನ್ನಯ್ಯ, ಗಿರೀಶ್ ಮಟ್ಟಣ್ಣನವರ್, ಸುಜಾತ ಭಟ್ ದೆಹಲಿಗೆ ತೆರಳಿದ್ದರು. ದೆಹಲಿಯಲ್ಲಿ ರಾತ್ರಿ ಚಿನ್ನಯ್ಯ, ಗಿರೀಶ್ ಮಟ್ಟಣ್ಣನವರ್ ಜೊತೆ ಮಲಗಿದ್ದಾಗ ಜಯಂತ್ ಟಿಗೆ ಭಯಾನಕ ಕನಸು ಬಿದ್ದಿತ್ತು. ಕೆಟ್ಟ ಕನಸು ಬಿದ್ದು ಕಿರುಚಿಕೊಂಡು ಜಯಂತ್ ಎದ್ದಿದ್ದರು. ಕೆಟ್ಟ ಕನಸಿನಿಂದಾಗಿ ದೆಹಲಿಯಲ್ಲೇ ಬುರುಡೆಯನ್ನು ಬಿಟ್ಟು ಜಯಂತ್, ಮಟ್ಟಣ್ಣನವರ್, ಸುಜಾತ ಭಟ್ ಬೆಂಗಳೂರಿಗೆ ಮರಳಿದ್ದರು.

ಜಯಂತ್ ಹೇಳಿಕೆಯಲ್ಲಿ ಏನಿದೆ? ರೈಲಿನಲ್ಲಿ ಬುರುಡೆಯನ್ನು ತೆಗೆದುಕೊಂಡು ನಾನು ದೆಹಲಿಗೆ ಹೋಗಿದ್ದೆ. ದೆಹಲಿಯಲ್ಲಿ ಸುಜಾತ ಭಟ್, ಗಿರೀಶ್ ಮಟ್ಟಣ್ಣನವರ್ ವಕೀಲರಾದ ಧನಂಜಯ್ ಬಳಿ ಮಾತನಾಡಿದರು. ನಾನು ವಕೀಲರನ್ನು ಭೇಟಿ ಮಾಡಿದ ನಂತರ ಶಾಂಗ್ರಿಲಾ ಹೋಟೆಲಿನಿಂದ ಕಾರಿನಲ್ಲಿ ವಿಠಲ ಮಂದಿರಕ್ಕೆ ಬಂದೆವು. ಕಾರಿನಿಂದ ಬುರುಡೆಯನ್ನು ನಾನೇ ತಂದು ಸುಜಾತ ಭಟ್ ರೂಮಿನಲ್ಲಿ ಇಟ್ಟೆನು. ಸುಜಾತ ಭಟ್ ಇದು ಏನು ಎಂದು ಕೇಳಿದಳು. ನಾನು ಏನಿಲ್ಲ ಬಿಡಿ ಎಂದು ಹೇಳಿ ಮಂಚದ ಹಿಂಬದಿಯಲ್ಲಿ ಅದನ್ನು ಇರಿಸಿದೆ. ಆ ದಿನ ರಾತ್ರಿ ಬುರುಡೆ ಸುಜಾತ ಭಟ್ ಕೋಣೆಯಲ್ಲಿ ಇತ್ತು. ನಾನು ಮಟ್ಟಣ್ಣನವರ್, ಚಿನ್ನಯ್ಯ ಒಂದು ರೂಮಿನಲ್ಲಿ ಮಲಗಿಕೊಂಡವು. ನನಗೆ ನಿದ್ದೆಯಲ್ಲಿ ಕಟ್ಟ ಕನಸು ಬಿದ್ದಿದ್ದು ನಾನು ಕಿರುಚಿಡಾಡಿದನು ಕನಸಿನಲ್ಲಿ ಕೆಟ್ಟ ಕಟ್ಟದು ಕಾಣುತ್ತಿತ್ತು. ಮೇ 5 ರಂದು ಸೋಮವಾರ ನಾವು 4 ಜನ ಬಾಡಿಗೆ ಕಾರು ಮಾಡಿಕೊಂಡು ಬುರುಡೆಯನ್ನು ತೆಗೆದುಕೊಂಡು ಸುಪ್ರೀಂಕೋರ್ಟ್ ಬಳಿ ವಕೀಲ ಕೆ.ವಿ ಧನಂಜಯ ಅವರನ್ನು ಭೇಟಿ ಮಾಡಲು ಹೋದೆವು. ಬುರುಡೆ ಕಾರಿನಲ್ಲೇ ಇತ್ತು. ದ್ವಾರದಲ್ಲೇ ನಮ್ಮನ್ನು ತಡೆದ ಕಾರಣ ಸುಪ್ರೀಂ ಕೋರ್ಟ್ ಒಳಗಡೆ ಹೋಗಲು ಸಾಧ್ಯವಾಗಲಿಲ್ಲ.

ಮತ್ತೆ ಧನಂಜಯ ಅವರ ವಕೀಲರು ಮಟ್ಟಣ್ಣನವರಿಗೆ ಫೋನ್ ಮಾಡಿ ಶಾಂಗ್ರೀಲಾ ಹೋಟೆಲ್ ಬಳಿ ಬರಲು ತಿಳಿಸಿದರು ಅದೇ ಕಾರಿನಲ್ಲಿ ನಾವು ಹೋಟೆಲಿಗೆ ಹೋದೆವು. ಬುರುಡೆಯನ್ನು ಕಾರಿನಲ್ಲಿಯೇ ಇಟ್ಟು, ಸುಜಾತ ಭಟ್ ಕಾರಿನಲ್ಲಿ ಬಿಟ್ಟು ನಾವು ಮೂವರು ಮೇಲೆ ಹೋದೆವು ಈ ಸಂರ್ಭದಲ್ಲಿ ಧನಂಜಯ್ ಅವರು ಯಾವುದೇ ಟೆನ್ಷನ್ ಮಾಡಿಕೊಳ್ಳುವ ಅವಶ್ಯಕತೆ ಇಲ್ಲ. ಸುಪ್ರೀಂ ಕೋರ್ಟ್ ನಲ್ಲಿ ಇದು ಎಫ್‌ಐಆರ್ ಆಗಿದೆಯೇ? ಎಂದು ನಮ್ಮನ್ನು ಕೇಳಿದ್ದಾರೆ. ನೀವು ವಾಪಸ್ ಹೋಗಿ ಧರ್ಮಸ್ಥಳದಲ್ಲಿ ಎಫ್‌ಐಆರ್ ಮಾಡಿಸಿ ಎಂದು ತಿಳಿಸಿದರು. ಆ ನಂತರ ನಾವು ಅದೇ ಕಾರಿನಲ್ಲಿ ವಾಪಸ್ ವಿಠಲ ಮಂದಿರಕ್ಕೆ ಬಂದೆವು. ನಾವು ಮೂವರು ವಿಮಾನದಲ್ಲಿ ಬೆಂಗಳೂರಿಗೆ ಹೋಗುತ್ತೇವೆ ನೀನು ರೈಲಿನಲ್ಲಿ ಬಾ ಎಂದು ಮಟ್ಟಣ್ಣನವರ್ ಹೇಳಿದ್ದರು. ಆದರೆ ನನಗೆ ನಿನ್ನೆ ಕೆಟ್ಟ ಕನಸು ಬಿದ್ದ ಕಾರಣ ನಾನು ರೈಲಿನಲ್ಲಿ ತರಲು ಸಾಧ್ಯವಿಲ್ಲ ಎಂದು ಹೇಳಿದೆ. ನಂತರ ಮಟ್ಟಣ್ಣನವರ್ ವಿಠಲ ಮಂದಿರ ಹುಡುಗರಿಗೆ ಹೇಳಿ ಈ ಬಾಕ್ಸ್ ಇಲ್ಲಿಯೇ ಇರಲಿ. ನಾವು ವಾಪಸ್ ಬಂದು ತೆಗೆದುಕೊಂಡು ಹೋಗುತ್ತೇವೆ ಎಂದು ಹೇಳಿ ನಾವು ಬೆಂಗಳೂರಿಗೆ ವಾಪಸ್ ಆದೆವು. ದೆಹಲಿಯಿಂದ ಬಂದ ಬಳಿಕ ಆಗಾಗ ಮಹೇಶ್ ತಿಮರೋಡಿ ಮನೆಯಲ್ಲಿ ನಾನು ಗಿರೀಶ್ ಮಟ್ಟಣನವರ್, ಪುರಂದರ ಗೌಡ, ವಿಠಲ ಗೌಡ, ಕುಸುಮಾವತಿ ಮುಂತಾದವರು ಪದೇ ಪದೇ ಭೇಟಿಯಾಗಿ ಸಭೆ ನಡೆಸುತ್ತಿದ್ದೆವು. ಧರ್ಮಸ್ಥಳದವರ (Dharmasthala) ವಿರುದ್ಧ ಯಾವ ರೀತಿ ಸುಳ್ಳು ಕೇಸನ್ನು ಪೊಲೀಸ್ ಠಾಣೆಯಲ್ಲಿ ರಿಜಿಸ್ಟರ್ ಮಾಡಿಸಬೇಕೆಂದು ಚರ್ಚೆಯಾಗುತ್ತಿತ್ತು. ತಮಿಳುನಾಡಿನಿಂದ ಚಿನ್ನಯ್ಯನನ್ನು ಕರೆಯಿಸಿ ಬುರುಡೆ ಕೊಟ್ಟು, ದೂರು ದಾಖಲಿಸುವುದು ಎಂದು ತೀರ್ಮಾನವಾಯಿತು.

ಮೇ 25 ರಂದು ನಾನು ಬೆಂಗಳೂರಿನಿಂದ ದೆಹಲಿಗೆ ವಿಮಾನದಲ್ಲಿ ತೆರಳಿದ್ದೆ. ವಿಠಲ ಮಂದಿರಕ್ಕೆ ಹೋಗಿ ರೈಲಿನಲ್ಲಿ ಬುರುಡೆಯನ್ನು ಮಂಗಳೂರಿಗೆ ತಂದೆ. ಮಂಗಳೂರಿನ ಸೆಂಟ್ರಲ್ ರೈಲ್ವೇ ನಿಲ್ದಾಣದಲ್ಲಿ ಇಳಿದ ಬಳಿಕ ರಿಕ್ಷಾದಲ್ಲಿ ಜ್ಯೋತಿ ಸರ್ಕಲ್ ಬಳಿ ಇರುವ ತಮ್ಮಣ್ಣ ಶೆಟ್ಟಿ ಅವರ ಕಚೇರಿಗೆ ಹೋದೆ. ಅಲ್ಲಿ ಊಟ ಮುಗಿಸಿದ ಬಳಿಕ ಪ್ರಮೋದ್ ಶೆಟ್ಟಿಗೆ ಫೋನ್ ಮಾಡಿದೆ. ನಂತರ ಪ್ರಮೋದ್ ಶೆಟ್ಟಿಯೇ ಕ್ರೇಟಾ ಕಾರಿನಲ್ಲಿ ಮಹೇಶ್ ಶೆಟ್ಟಿ ತಿಮರೋಡಿ ಮನೆಗೆ ನನ್ನನ್ನು ಕರೆ ತಂದನು. ನಾನು ಈ ಬುರುಡೆಯನ್ನು ತಿಮರೋಡಿಗೆ ನೀಡಿದೆನು.

ಧರ್ಮಸ್ಥಳ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂದು ಆರೋಪಿಸಲಾದ ಪ್ರಕರಣದ ತನಿಖೆ ನಡೆಸಿದ ಎಸ್‌ಐಟಿ ನ.20 ರಂದು ಬೆಳ್ತಂಗಡಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ತನಿಖಾ ಪ್ರಾಥಮಿಕ ವರದಿ ಸಲ್ಲಿಸಿತ್ತು. ಈ ತನಿಖಾ ವರದಿಯಲ್ಲಿ 6 ಮಂದಿ ಯಾವ ರೀತಿ ನ್ಯಾಯಾಲಯದ (Court) ದಾರಿ ತಪ್ಪಿಸಿದ್ದಾರೆ ಎಂಬುದನ್ನು ಎಳೆ ಎಳೆಯಾಗಿ ಉಲ್ಲೇಖಿಸಲಾಗಿದೆ.

ಯಾರೆಲ್ಲಾ ಆರೋಪಿಗಳು?
ಎ1 – ಚಿನ್ನಯ್ಯ, ಎ2 – ಮಹೇಶ್ ಶೆಟ್ಟಿ ತಿಮರೋಡಿ, ಎ3 – ಗಿರೀಶ್ ಮಟ್ಟಣ್ಣನವರ್, ಎ4 – ವಿಠಲ ಗೌಡ, ಎ5 – ಜಯಂತ್ ಟಿ, ಎ6 – ಸುಜಾತ ಭಟ್

## ಮೂರು ಕಡೆ ಮಾದಕ ವಸ್ತು ಫ್ಯಾಕ್ಟರಿ ಪತ್ತೆ: ಪ್ರಕರಣ ದಾಖಲು

**ಬೆಂಗಳೂರು:** ನಗರದಲ್ಲಿ ಮಹಾರಾಷ್ಟ್ರ ಪೊಲೀಸರಿಂದ ಡ್ರಗ್ಸ್ ಫ್ಯಾಕ್ಟರಿ ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ಅಮಾನತು ಮಾಡಲಾಗಿದೆ. ಈ ಕುರಿತು ಪೊಲೀಸ್ ಕಮೀಷನರ್ ಸೀಮಂತ್ ಕುಮಾರ್ ಅವರು, ಕೊತ್ತನೂರು, ಬಾಗಲೂರು, ಅವಲಹಳ್ಳಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ಅಮಾನತು ಮಾಡಿ, ಆದೇಶ ಹೊರಡಿಸಿದ್ದಾರೆ. ಇತ್ತೀಚಿಗೆ ಮಹಾರಾಷ್ಟ್ರ ಎಎನ್‌ಟಿಎಫ್‌ನಿಂದ ಬೆಂಗಳೂರಲ್ಲಿ ಮೂರು ಡ್ರಗ್ಸ್ ಫ್ಯಾಕ್ಟರಿ ಸೀಜ್ ಮಾಡಿ, ಬರೋಬ್ಬರಿ 55.88 ಕೋಟಿ ರೂ. ಮೌಲ್ಯದ ಎಂಡಿ ಸಿಂಥೆಟಿಕ್ ಡ್ರಗ್ಸ್ ಅನ್ನು ಪೊಲೀಸರು ವಶಪಡಿಸಿಕೊಂಡಿದ್ದರು. ಇದೇ ವೇಳೆ ನಾಲ್ವರು ಆರೋಪಿಗಳನ್ನು ಕೂಡ ಅರೆಸ್ಟ್ ಮಾಡಿದ್ದರು.

ಮುಂಬೈನಲ್ಲಿ ಇತ್ತೀಚೆಗೆ 1.5 ಕೋಟಿ ರೂ. ಮೌಲ್ಯದ ಡ್ರಗ್ಸ ಸೀಜ್ ಆಗಿತ್ತು. ಅಲ್ಲಿ ಅಬ್ದುಲ್ಲ ಖಾದರ್ ಶೇಕ್ ಎಂಬಾತನ ಬಂಧನವಾಗಿತ್ತು. ವಿಚಾರಣೆ ನಂತರ ಬೆಳಗಾವಿಯ ಪ್ರಶಾಂತ್ ಯಲ್ಲಪ್ಪ ಪಾಟೀಲ್ ಬಂಧಿಸಲಾಗಿತ್ತು. ಪಾಟೀಲ್ ಮಾಹಿತಿ ಮೇರೆಗೆ ಬೆಂಗಳೂರಿನ ಮೂರು ಕಡೆ ದಾಳಿ ನಡೆಸಲಾಗಿತ್ತು. ಈ ವೇಳೆ ರಾಜಸ್ಥಾನದ ಸೂರಜ್ ರಮೇಶ್ ಯಾದವ್ ಮತ್ತು ಮಲ್ಖಾನ್ ರಾಮಲಾಲ್ ಬಿಷ್ಣೋಯ್ ಬಂಧನವಾಗಿದೆ. ಆರ್‌ಜೆ ಇವೆಂಟ್ ಹೆಸರಿನಲ್ಲಿ ಡ್ರಗ್ಸ್ ಫ್ಯಾಕ್ಟರಿ ನಡೆಸುತ್ತಿರುವುದು ಪತ್ತೆಯಾಗಿದೆ. ಹೊರಮಾವು, ಯರಪ್ಪನಹಳ್ಳಿ, ಕಣ್ಣೂರು ಬಳಿ ಡ್ರಗ್ಸ್ ಫ್ಯಾಕ್ಟರಿ ಪತ್ತೆಹಚ್ಚಲಾಗಿದೆ.

ದಾಳಿಗಳ ವೇಳೆ 4.1 ಕೆಜಿ ಘನ ಎಂಡಿ ಮತ್ತು 17 ಕೆಜಿ ದ್ರವ ಎಂಡಿ ಸೇರಿದಂತೆ ಒಟ್ಟು 21.4 ಕೆಜಿ ಡ್ರಗ್ಸ್ ವಶಕ್ಕೆ ಪಡೆಯಲಾಗಿದೆ. ಡ್ರಗ್ಸ್ ತಯಾರಿಸುವ ಯಂತ್ರೋಪಕರಣಗಳು ಮತ್ತು ರಾಸಾಯನಿಕ ವಶಕ್ಕೆ ಪಡೆದುಕೊಳ್ಳಲಾಗಿದೆ. ಈ ಫ್ಯಾಕ್ಟರಿಗಳಿಂದ ದೇಶದ ಅನೇಕ ರಾಜ್ಯಗಳಿಗೆ ಡ್ರಗ್ಸ್ ಸಪ್ಲೈ ಆಗುತ್ತಿದ್ದ ಶಂಕೆ ವ್ಯಕ್ತವಾಗಿದೆ. ಸದ್ಯ ಬಂಧಿತರನ್ನ ಮಹಾರಾಷ್ಟ್ರ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಮಹಾರಾಷ್ಟ್ರ ಎಎನ್‌ಟಿಎಫ್ ಕಾರ್ಯಾಚರಣೆ ನಡೆಸಿತ್ತು. ರಾಜಸ್ಥಾನ ಮೂಲದ ಕಿಂಗ್‌ಪಿನ್‌ಗಳಿಂದ ಡ್ರಗ್ಸ್ ಫ್ಯಾಕ್ಟರಿ ನಡೆಯುತ್ತಿತ್ತು. ಇಬ್ಬರು ಬೆಂಗಳೂರಿನ ಮೂರು ಕಡೆ ಡ್ರಗ್ಸ್ ಫ್ಯಾಕ್ಟರಿ ನಡೆಸುತ್ತಿದ್ದರು. ಯೋಗಿರಾಜ್ ಕುಮಾರ್, ನಯನ್ ಪವರ್ ಇಡೀ ದಂಧೆಯ ಕಿಂಗ್‌ಪಿನ್‌ಗಳು. ಮೂಲತಃ ರಾಜಸ್ಥಾನದ ಇಬ್ಬರು ಡ್ರಗ್ಸ್ ಬ್ಯುಸಿನೆಸ್‌ಮೆನ್‌ಗಳು. ದೇಶದ ಅನೇಕ ಕಡೆ ಡ್ರಗ್ಸ್ ಫ್ಯಾಕ್ಟರಿ ನಡೆಸುತ್ತಿದ್ದಾರೆ. ಸದ್ಯ ನಾಲ್ವರನ್ನ ಬಂಧಿಸಿ ಕಿಂಗ್‌ಪಿನ್‌ಗಳಿಗೆ ಹುಡುಕಾಟ ನಡೆಸಲಾಗಿದೆ

## ಅಂಗಾಗದಾನ ಮಾಡಿ ಸಾರ್ಥಕತೆ ಮೆರೆದ ಕುಟುಂಬಸ್ಥರು.



**ಪೀಣ್ಯದಾಸರಹಳ್ಳಿ:** ಅಪಘಾತಕ್ಕೀಡಾಗಿ ಮೆದುಳು ನಿಷ್ಕ್ರಿಯಗೊಂಡ ವ್ಯಕ್ತಿ ಯೊಬ್ಬರ ಕಣ್ಣು,ಹೃದಯ,ಕಿಡ್ನಿ,ಲಿವರ್ ಗಳನ್ನು ಕುಟುಂಬದ ನಿರ್ಧಾರದಿಂದ 8ನೇ ಮೈಲಿ ಬಳಿಯ ಪ್ರಕ್ರಿಯ ಆಸ್ಪತ್ರೆಯಿಂದ ನಾರಾಯಣ ಹೃದಯಾಲಯಕ್ಕೆ ಹೃದಯ, ಮಿಂಟೋ ಆಸ್ಪತ್ರೆಗೆ ಕಣ್ಣು ಮತ್ತು ಸೆಂಟ್ ಜಾನ್ ಆಸ್ಪತ್ರೆಗೆ ಕಿಡ್ನಿ, ಲಿವರ್ ಗಳನ್ನು ನೂತನ ತಂತ್ರಜ್ಞಾನದೊಂದಿಗೆ ಆಂಬ್ಯುಲೆನ್ಸ್‌ನ ಮೂಲಕ ರವಾನಿಸಲಾಯಿತು.

ಮೈತ್ರಿ(39) ಎಂಬ ಮಹಿಳೆಗೆ ಅಪಘಾತವಾದ ಅವರನ್ನು ಪ್ರಕ್ರಿಯ ಆಸ್ಪತ್ರೆಗೆ ಸೇರಿಸಲಾಗಿ ವೈದ್ಯರು ಮೆದುಳು ನಿಷ್ಕ್ರಿಯವಾಗಿರುವುದನ್ನು ಕುಟುಂಬದವರಿಗೆ ತಿಳಿಸಿದರು. ಆಗ ಉಳಿದ ಅಂಗಾಂಗಗಳನ್ನು ದಾನ ಮಾಡಿದರೆ ಇನ್ನು ಹತ್ತಾರು ಜನರಿಗೆ ಜೀವ ಉಳಿಸಬಹುದು ಎಂದು ಕುಟುಂಬದವರಿಗೆ ಮನವರಿಕೆ ಮಾಡಿದರು.

ಅದಕ್ಕೆ ಒಪ್ಪಿದ ಕುಟುಂಬಸ್ಥರು ಕಣ್ಣು,ಹೃದಯ,ಕಿಡ್ನಿ,ಲಿವರ್ ಸೇರಿದಂತೆ ಅಂಗಾಂಗಗಳನ್ನು ದಾನ ಮಾಡಲು ಒಪ್ಪಿದರು, ಕುಟುಂಬದ ಒಪ್ಪಿಗೆ ಮೇರೆಗೆ ತಕ್ಷಣ ಪ್ರಕ್ರಿಯ ಆಸ್ಪತ್ರೆ ವೈದ್ಯರು ಅಂಗಾಂಗಗಳನ್ನು ಬೇರ್ಪಡಿಸಿ ರವಾನಿಸಲಾಯಿತು. ಘಟನೆ ಹಿನ್ನೆಲೆ: ಬೆಂಗಳೂರು ಉತ್ತರ ತಾಲೂಕಿನ ತೋಟದ ಗುಡ್ಡದಹಳ್ಳಿಯಲ್ಲಿ ಕಾರಿನಲ್ಲಿ ಮನೆಗೆ ತೆರಳುತ್ತಿದ್ದ ಒಂದೇ ಕುಟುಂಬದ 6 ಜನ 25 ನೇ ತಾರೀಖು ಸಂಜೆ 7:30 ರಲ್ಲಿ ಕಂಟ್ರೋಲ್ ಸಿಗದೇ ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಇಬ್ಬರು ಸಾವನ್ನಪ್ಪಿದ್ದರು. ಉಳಿದವರು ಗಂಭೀರ ಗಾಯವಾಗಿ ಸ್ಪರ್ಶ ಆಸ್ಪತ್ರೆಗೆ ದಾಖಲಾಗಿದ್ದು, ಅದರಲ್ಲಿ ಮೈತ್ರಿ ಎಂಬ ಮಹಿಳೆ ಎಂಟನೇ ಮೈಲಿಯ ಪ್ರಕ್ರಿಯ ಆಸ್ಪತ್ರೆಯಲ್ಲಿ ನಾಲ್ಕು ದಿನಗಳಿಂದ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಅಂಗಾಂಗದಾನದ ಬಗ್ಗೆ ಮಾತನಾಡಿದ ಮೈತ್ರಿ ಅವರ ತಂಗಿ ಮೇಘ ಮತ್ತು ತಮ್ಮ ಹರ್ಷಿತ್'ನಮ್ಮ ಅಕ್ಕ ಅವರಂತೂ ಮೆದುಳು ನಿಷ್ಕ್ರಿಯಗೊಂಡು ಉಳಿಯಲಿಲ್ಲ,ಅಂಗಾಂಗಗಳ ದಾನದಿಂದ ಬೇರೆ ಜೀವಗಳು ಉಳಿಯುತ್ತವೆ ಎಂದರೆ ಎಲ್ಲೋ ಒಂದು ಕಡೆ ನಮ್ಮ ಅಕ್ಕ ಜೀವಂತವಾಗಿರುತ್ತಾರೆ ಎಂಬುದು ಸಾಕ್ಷಿಯಾಗಿದೆ' ಎಂದರು.

ಪ್ರಕ್ರಿಯ ಆಸ್ಪತ್ರೆ ಸಿಇಒ ಶ್ರೀನಿವಾಸ್ ಸಿ ಹೆಚ್ ಮಾತನಾಡಿ,'ಮೆದುಳು ನಿಷ್ಕ್ರಿಯವಾಗಿ ಮೃತಪಟ್ಟವರ ಎಲ್ಲಾ ಕುಟುಂಬದವರು ಅಂಗಾಂಗಗಳ ದಾನಕ್ಕೆ ಒಪ್ಪುವುದಿಲ್ಲ,ಮೃತ ವ್ಯಕ್ತಿಯ ಅಂಗಾಂಗಳಿಂದ ಬೇರೆಯವರ ಜೀವ ಉಳಿಸಬಹುದು ಎಂಬ ಜಾಗೃತಿಯನ್ನು ಎಲ್ಲರೂ ಅರಿಯಬೇಕು'ಎಂದು ಮನವಿ ಮಾಡಿದರು

## ಅಕ್ರಮ ಸಂಬಂಧದ ಬಲೆಗೆ ಸಿಲುಕಿಸಿ ಬ್ಲ್ಯಾಕ್‌ಮೇಲ್ ಮಗನೊಂದಿಗೆ ಮಹಿಳೆ ಆತ್ಮಹತ್ಯೆ

**ತುಮಕೂರು:** ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಕಳ್ಳಂಬೆಳ್ಳದಲ್ಲಿ ತಾಯಿ-ಮಗ ಆತ್ಮಹತ್ಯೆಗೆ ಶರಣಾದ ಪ್ರಕರಣಕ್ಕೀಗ ಸ್ಫೋಟಕ ತಿರುವು ದೊರೆತಿದೆ. ಮಹಿಳೆ ಪರ ಪುರುಷನ ಸಹವಾಸ ಮಾಡಿದ್ದೇ ಆಕೆಗೆ ಮುಳುವಾಗಿದೆ ಎಂಬುದು ತಿಳಿದುಬಂದಿದೆ. ದೂರವಾಣಿ ಸಂಭಾಷಣೆ, ವಿಡಿಯೋ ಮುಂದಿಟ್ಟುಕೊಂಡು ಬ್ಲ್ಯಾಕ್ ಮೇಲ್ ಮಾಡಲಾಗುತ್ತಿತ್ತು ಎಂಬ ಆರೋಪ ಕೇಳಿಬಂದಿದ್ದು, ಇದರಿಂದ ಮನನೊಂದು ಮಹಿಳೆ ಸಾವಿನ ಮೊರೆ ಹೋಗಿರುವುದು ಬಹಿರಂಗವಾಗಿದೆ. ಮೃತರನ್ನು ಹಂಸಲೇಖ (32) ಹಾಗೂ ಆಕೆಯ 8 ವರ್ಷದ ಪುತ್ರ ಗುರುಪ್ರಸಾದ್ ಎಂದು ಗುರುತಿಸಲಾಗಿದೆ. ಮಲ್ಲಿಕಾರ್ಜುನ ಎಂಬಾತನೊಂದಿಗೆ ಹಂಸಲೇಖ ಸಂಪರ್ಕ ಹೊಂದಿದ್ದಳು ಎನ್ನಲಾಗಿದೆ. ಆತ ತನ್ನ ಬಳಿ ಇರುವ ಸಂಭಾಷಣೆಗಳು ಮತ್ತು ವಿಡಿಯೋಗಳನ್ನು ಆಧಾರವಾಗಿ ಮಾಡಿಕೊಂಡು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಭಯಗೊಂಡ ಹಂಸಲೇಖ, ಮಗನೊಂದಿಗೆ ಮನೆ ತೊರೆದು ಶುಕ್ರವಾರ ಸ್ನೇಹಿತೆಯ ಮನೆಯಲ್ಲಿ ಉಳಿದುಕೊಂಡಿದ್ದಳು.

ಬೆಳಗ್ಗೆ ಕಳ್ಳಂಬೆಳ್ಳ ಕೆರೆಯಲ್ಲಿ ತಾಯಿ-ಮಗ ಇಬ್ಬರೂ ನೀರಿಗೆ ಹಾರಿ ಸಾವನ್ನಪ್ಪಿರುವುದು ಗೊತ್ತಾಗಿದೆ. ಸ್ಥಳಕ್ಕೆ ಕಳ್ಳಂಬೆಳ್ಳ ಪೊಲೀಸ್ ಠಾಣೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹಗಳನ್ನು ಕೆರೆಯಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಈ ಪ್ರಕರಣದ ಹಿನ್ನೆಲೆ ಪರಿಶೀಲನೆ ನಡೆಸುತ್ತಿರುವ ಪೊಲೀಸರು, ಬ್ಲ್ಯಾಕ್‌ಮೇಲ್ ಆರೋಪದ ಕುರಿತು ತನಿಖೆ ಆರಂಭಿಸಿದ್ದಾರೆ. ಘಟನೆ ಸಂಬಂಧ ಕಳ್ಳಂಬೆಳ್ಳ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಆರೋಪಿಯ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಹಂಸಲೇಖ ಭೂಪಸಂದ್ರ ಗ್ರಾಮದ ನಾಗೇಶ್ ಜೊತೆ ವಿವಾಹವಾಗಿದ್ದರು. ದಂಪತಿಗೆ ಇಬ್ಬರು ಗಂಡು ಮಕ್ಕಳು ಇದ್ದು, ಕೆಲವು ವರ್ಷಗಳ ಹಿಂದೆ ಹಂಸಲೇಖ ಪತಿ ನಾಗೇಶ್ ಅನಾರೋಗ್ಯದಿಂದ ಮೃತಪಟ್ಟಿದ್ದರು. 3 ವರ್ಷದ ಹಿಂದೆ ನಾಗೇಶ್ ಸಹೋದರ ಲೋಕೇಶ್ ಜತೆ ಹಂಸಲೇಖಗೆ ಮದುವೆ ಮಾಡಲಾಗಿತ್ತು. ಆದಾಗ್ಯೂ ಪರ ಪುರುಷನ ಸಹವಾಸ ಮಾಡಿದ್ದು, ಮುಳುವಾಗಿದೆ. ಪರಿಣಾಮವಾಗಿ ಮಗನೊಂದಿಗೆ ಆತ್ಮಹತ್ಯೆಗೆ ಶರಣಾಗಿದ್ದಾಳೆ.

## ಕಂದಕಕ್ಕೆ ಉರುಳಿದ ಬಸ್ – 7 ಮಂದಿ ಸಾವು, 12 ಜನರಿಗೆ ಗಾಯ



**ಡೆಹ್ರಾಡೂನ್:** ಉತ್ತರಾಖಂಡದ ಅಲ್ಮೋರಾ ಭಿಕಿಯಾಸೈನ್ ಎಂಬಲ್ಲಿ ಬಸ್ ಕಂದಕಕ್ಕೆ ಉರುಳಿ ಏಳು ಜನರು ಸಾವನ್ನಪ್ಪಿದ್ದು, ಸುಮಾರು 12 ಜನರು ಗಾಯಗೊಂಡಿದ್ದಾರೆ. ಬಸ್ ಅಲ್ಮೋರಾದ ದ್ವಾರಹತ್ ನಿಂದ ನೈನಿತಾಲ್‌ನ ರಾಮನಗರಕ್ಕೆ ತೆರಳುತ್ತಿತ್ತು. ಈ ವೇಳೆ ಅಪಘಾತ ಸಂಭವಿಸಿದೆ. ಬಸ್‌ನಲ್ಲಿ 19 ಪ್ರಯಾಣಿಕರಿದ್ದರು. ಚಾಲಕನ ನಿಯಂತ್ರಣ ತಪ್ಪಿ ಈ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಆರು ಜನರು ಸ್ಥಳದಲ್ಲೇ ಸಾವನ್ನಪ್ಪಿದರೆ, ಮತ್ತೊಬ್ಬರು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಸಾವನ್ನಪ್ಪಿದರು. ಚಾಲಕ ಸೇರಿದಂತೆ 12 ಜನ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದ ಸ್ಥಳದಲ್ಲಿ ರಕ್ಷಣಾ ತಂಡಗಳು ರಕ್ಷಣಾ ಕಾರ್ಯಾಚರಣೆ ನಡೆಸಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ.

ಸಿಎಂ ಪುಷ್ಕರ್ ಸಿಂಗ್ ಧಾಮಿಯವರು ಈ ಅಪಘಾತದಲ್ಲಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಕೋರಿದ್ದಾರೆ. ಎಲ್ಲಾ ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ದೇವರನ್ನು ಪ್ರಾರ್ಥಿಸುತ್ತೇನೆ. ಇಡೀ ಘಟನೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ಮತ್ತು ನಾನು ಸ್ಥಳೀಯ ಆಡಳಿತ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇನೆ.

ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಅವರು ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಪೋಸ್ಟ್‌ನಲ್ಲಿ ಗಾಯಗೊಂಡ ಪ್ರಯಾಣಿಕರನ್ನು ಜಿಲ್ಲಾಡಳಿತವು ಹತ್ತಿರದ ಆಸ್ಪತ್ರೆಗಳಿಗೆ ದಾಖಲಿಸಿದೆ. ಗಂಭೀರವಾಗಿ ಗಾಯಗೊಂಡವರನ್ನು ಉತ್ತಮ ಚಿಕಿತ್ಸೆಗಾಗಿ ಉನ್ನತ ವೈದ್ಯಕೀಯ ಕೇಂದ್ರಗಳಿಗೆ ದಾಖಲಿಸಲಾಗಿದೆ ಎಂದು ಉಲ್ಲೇಖಿಸಿದ್ದಾರೆ.

## ನಡುರಸ್ತೆಯಲ್ಲೇ ಪತ್ನಿಗೆ ಗುಂಡಿಟ್ಟು ಹತ್ಯೆ: ಬಿಹಾರ ಮೂಲದ ವ್ಯಕ್ತಿಯಿಂದ ₹80 ಸಾವಿರಕ್ಕೆ ಗನ್ ಖರೀದಿ



**ಬೆಂಗಳೂರು:** ನಡುರಸ್ತೆಯಲ್ಲೇ ಪತ್ನಿಗೆ ಗುಂಡಿಟ್ಟು ಕೊಂದ ಪತಿ, ಬಿಹಾರ ಮೂಲದ ವ್ಯಕ್ತಿಯಿಂದ 80 ಸಾವಿರಕ್ಕೆ ಗನ್ ಖರೀದಿ ಮಾಡಿದ್ದ ಎಂಬ ವಿಚಾರ ಪೊಲೀಸ್ ತನಿಖೆಯಿಂದ ಬಯಲಾಗಿದೆ. ಪತ್ನಿಗೆ ಗನ್‌ನಿಂದ ಐದು ಸುತ್ತು ಗುಂಡು ಹಾರಿಸಿ ಕೊಲೆ ಮಾಡಿ ಮಾಗಡಿ ರೋಡ್ ಪೊಲೀಸ್ ಠಾಣೆಗೆ ಹೋಗಿ ಪತಿ ಆರೋಪಿ ಬಾಲಮುರಗನ್ ಸರೆಂಡರ್ ಆಗಿದ್ದ. ಆರೋಪಿ ವಿರುದ್ಧ ಕೊಲೆ ಕೇಸ್ ದಾಖಲಿಸಿಕೊಂಡಿದ್ದ ಮಾಗಡಿ ರೋಡ್ ಪೊಲೀಸರು ಕಸ್ಟಡಿಗೆ ಪಡೆದು ವಿಚಾಣೆಗೆ ಒಳಪಡಿಸಿದ್ದರು. ವಿಚಾರಣೆ ವೇಳೆ ಪತ್ನಿಯನ್ನ ಆರೋಪಿ ಬಾಲ ಮುರಗನ್ ಹತ್ಯೆ ಮಾಡಿದ್ದು, ಯಾಕೆ ಮತ್ತು ಹತ್ಯೆ ಮಾಡಿದ ಗನ್ ಎಲ್ಲಿಯದ್ದು ಎಂಬ ವಿಚಾರವನ್ನು ಬಾಯಿಬಿಟ್ಟಿದ್ದಾನೆ. ಪತ್ನಿಯ ಹತ್ಯೆ ಮಾಡುವುದಕ್ಕೆ ಅಂತಲೇ ಗನ್ ಖರೀದಿ ಮಾಡಿದ್ದಾನೆ.

80 ಸಾವಿರ ಹಣ ಕೊಟ್ಟು ಗನ್ ಖರೀದಿ ಮಾಡಿರುವುದು ತಿಳಿದು ಬಂದಿದೆ. ಹೇಗೆ ಮತ್ತು ಯಾರ ಬಳಿ ಖರೀದಿ ಮಾಡಿದ್ದಾನೆ ಎಂಬುದನ್ನ ಕೂಡ ಪೊಲೀಸರು ಆರೋಪಿಯಿಂದ ತಿಳಿದುಕೊಂಡಿದ್ದಾರೆ.

ಪತ್ನಿಯನ್ನ ಮುಗಿಸಲೇಬೇಕೆಂದು ತೀರ್ಮಾನಿಸಿ ಆನ್‌ಲೈನ್‌ನಲ್ಲಿ ಗನ್ ಬಗ್ಗೆ ಮಾಹಿತಿಗಾಗಿ ತಡಕಾಡಿದ್ದ. ವೃತ್ತಿಯಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿರುವುದರಿಂದ ಡಾರ್ಕ್ ವೆಬ್ ಮುಖಾಂತರ ಗನ್ ತರಿಸಿಕೊಳ್ಳಲು ಪ್ಲ್ಯಾನ್ ಮಾಡಿದ್ದ.

ಮೂರನೇ ವ್ಯಕ್ತಿಯಿಂದ ಬಿಹಾರ ಮೂಲದ ವ್ಯಕ್ತಿಯನ್ನು ಆರೋಪಿ ಸಂಪರ್ಕಿಸಿದ್ದ. ಬಿಹಾರ ಮೂಲದ ವ್ಯಕ್ತಿಯಿಂದ ಗನ್ ತರಿಸಿಕೊಂಡಿರುವ ಬಗ್ಗೆ ಪೊಲೀಸರಿಗೆ ಆರೋಪಿ ಬಾಲ ಮುರಗನ್ ಹೇಳಿಕೊಂಡಿದ್ದಾನೆಂದು ತಿಳಿದು ಬಂದಿದೆ. ತಿಂಗಳುಗಳ ಪ್ರಯತ್ನದ ಬಳಿಕ ಗನ್ ತನಗೆ ಸಿಕ್ಕಿದ್ದಾಗಿ ಆರೋಪಿಯು ಪೊಲೀಸರ ಮುಂದೆ ಹೇಳಿಕೊಂಡಿದ್ದಾನೆ.

ಪೊಲೀಸರು ಅಷ್ಟಕ್ಕೆ ಸುಮ್ಮನಾಗದೆ ಗನ್ ಕೊಟ್ಟವನ ಮಾಹಿತಿ ಕಲೆ ಹಾಕುವ ಕೆಲಸಕ್ಕೆ ಮುಂದಾಗಿದ್ದಾರೆ. ಗನ್ ಕೊಟ್ಟ ವ್ಯಕ್ತಿ ಪತ್ತೆ ಹಚ್ಚಿದರೆ ಅಕ್ರಮ ಗನ್ ಮಾರಾಟ ಮಾಡುವ ಜಾಲವನ್ನ ಬಲೆಗೆ ಬೀಳಿಸಬಹುದೆಂದು ಪೊಲೀಸರು ತನಿಖೆಗೆ ಇಳಿದಿದ್ದಾರೆ ಎನ್ನಲಾಗಿದೆ.

## 3 ಕೋಟಿ ರೂ. ವಿಮೆ ಹಣ ಪಡೆಯಲು, ತಂದೆಗೆ ಹಾವು ಕಚ್ಚಿಸಿದ ಮಕ್ಕಳು

**ತಿರುವಲ್ಲೂರು:** ವಿಮಾ ಹಣ ಪಡೆಯಲು ಮಕ್ಕಳೇ ತಂದೆಗೆ ಹಾವು ಕಚ್ಚಿಸಿರುವ ಘಟನೆ ತಮಿಳುನಾಡಿನ ತಿರುವಲ್ಲೂರು ಜಿಲ್ಲೆಯಲ್ಲಿ ನಡೆದಿದೆ. ಸುಮಾರು 3 ಕೋಟಿ ರೂಪಾಯಿ ಮೌಲ್ಯದ ವಿಮಾ ಹಣವನ್ನು ಪಡೆಯಲು ಹಾವು ಕಚ್ಚಿಸಿ ಸರ್ಕಾರಿ ನೌಕರನ ಕೊಲೆಗೆ ಸಂಚು ರೂಪಿಸಿದ ಆರೋಪದ ಮೇಲೆ ಮೃತ ವ್ಯಕ್ತಿಯ ಇಬ್ಬರು ಪುತ್ರರು ಸೇರಿದಂತೆ ಆರು ಜನರನ್ನು ಪೊಲೀಸರು ಬಂಧಿಸಿದ್ದಾರೆ. ಈ ಘಟನೆ ಅಕ್ಟೋಬರ್ 22 ರಂದು ತಿರುವಲ್ಲೂರು ಬಳಿಯ ಪೋಥತುರ್ಪೆಟ್ಟೈನಲ್ಲಿ ನಡೆದಿದ್ದು, ಮೃತರನ್ನು ಗಣೇಶ್ (56) ಸರ್ಕಾರಿ ಸಂಸ್ಥೆಯಲ್ಲಿ ಪ್ರಯೋಗಾಲಯ ಸಹಾಯಕರಾಗಿ ಕೆಲಸ ಮಾಡುತ್ತಿದ್ದರು. ಗಣೇಶ್ ನಿದ್ದೆ ಮಾಡುತ್ತಿದ್ದಾಗ ಕುತ್ತಿಗೆಗೆ ಹಾವು ಕಚ್ಚಿ ಸಾವನ್ನಪ್ಪಿದ್ದರು. ಆರಂಭದಲ್ಲಿ ಈ ಸಾವನ್ನು ಆಕಸ್ಮಿಕ ಎಂದು ಪರಿಗಣಿಸಲಾಗಿತ್ತು. ಆದಾಗ್ಯೂ, ವಿಮಾ ಕಂಪನಿಗಳು ಪ್ರಕರಣ ದಾಖಲಿಸಿದ ನಂತರ ಅನುಮಾನ ಹುಟ್ಟಿಕೊಂಡಿತ್ತು.

ಗಣೇಶ್ ಸುಮಾರು 3 ಕೋಟಿ ರೂಪಾಯಿಗಳ ಒಟ್ಟು ವಿಮಾ ರಕ್ಷಣೆಯೊಂದಿಗೆ 11 ವಿಮಾ ಪಾಲಿಸಿಗಳನ್ನು ತೆಗೆದುಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅವರ ಸಾವಿಗೆ ಕೆಲವು ವಾರಗಳ ಮೊದಲು ಅವರು ಅಪಘಾತಕ್ಕೀಡಾಗಿದ್ದರು ಎಂದು ತನಿಖಾಧಿಕಾರಿಗಳು ಕಂಡುಕೊಂಡರು, ಇದು ಮತ್ತಷ್ಟು ಕಳವಳ ಮೂಡಿಸಿತ್ತು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

